# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ 72ರಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ

**ಪ್ರಶ್ನೆ:** ಕುಂದಾಪುರ ಕರ್ನಾಟಕಕ್ಕೆ, ಭಾರತ ದೇಶಕ್ಕೆ ವಿವಿಧ ವಿಷಯಗಳಲ್ಲಿ ಅದ್ಭುತವಾದ ಕೊಡುಗೆ ನೀಡಿದ ಊರಾಗಿದ್ದು. ಕುಂದಾಪ್ರ ಭಾಷೆ, ಸಂಸ್ಕೃತಿಯ ವಿಚಾರದಲ್ಲಂತೂ ಇದು ತನ್ನದೇ ಆದ ವೈಶಿಷ್ಟ್ಯವನ್ನು ಉಳಿಸಿಕೊಂಡಿದೆ. ಬೈಂದೂರಿನಿಂದ ಬ್ರಹ್ಮಾವರದ ತನಕ, ಇತ್ತ ಬಸ್ರೂರಿನಿಂದ ಹೆಬ್ರಿ ತನಕ ಮಲೆನಾಡು, ಕರಾವಳಿಯ 300ಕ್ಕೂ ಹೆಚ್ಚು ಗ್ರಾಮಗಳಲ್ಲಿ ಕುಂದ ಕನ್ನಡ ಭಾಷೆಯಲ್ಲೇ ಸ್ಪಷ್ಟವಾಗಿ ಮಾತನಾಡುವ 25 ಲಕ್ಷಕ್ಕೂ ಹೆಚ್ಚು ಜನರಿದ್ದಾರೆ. ಈ ಜನರ ಆಟ-ಪಾಠಗಳಲ್ಲಿ, ಕೃಷಿ, ಮೀನುಗಾರಿಕೆ ಚಟುವಟಿಕೆಗಳಲ್ಲಿ, ಧಾರ್ಮಿಕ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ, ಕಂಬಳ, ಕೋಲ, ಹೋಳಿ ಆಚರಣೆಗಳಲ್ಲಿ ಕುಂದಾಪ್ರ ಕನ್ನಡ ಭಾಷೆಯ ಸೊಬಗು ಕಾಣ ಸಿಗುತ್ತದೆ. ತಾಲ್ಲೂಕು ಬದಲಾದಾಗ ಕುಲಕಸುಬುಗಳಿಗೆ ಅನುಗುಣವಾಗಿ ಕೆಲವು ಶಬ್ದಗಳು ಬದಲಾದರು ಕುಂದ ಕನ್ನಡ ಸಮೃದ್ಧಿ ಕಾಣುತ್ತದೆ.

ಕಳೆದ ಒಂದು ಶತಮಾನದಲ್ಲಿ ಕುಂದ ಕನ್ನಡ ಭಾಷೆಯ ಬಳಕೆಗಳ ಸ್ಪಷ್ಟ ದಾಖಲೆ ಸಿಗುತ್ತದೆ. ತಮ್ಮ ಸಾಹಿತ್ಯದಲ್ಲಿ, ಪಾತ್ರಗಳ ಆಡು ಮಾತಿನಲ್ಲಿ, ಕುಂದಾಪ್ರ ಕನ್ನಡವನ್ನೇ ಬಳಕೆ ಮಾಡಿ, ಯಶಸ್ವಿಯಾದವರು ವೈದೇಹಿ, ಮಿತ್ರ ವೆಂಕಟರಾಜು, ಗಾಯಿತ್ರಿ ನಾವಡ, ಮಾಧುರಿಕೃಷ್ಣ, ವರಮಹಾಲಕ್ಷ್ಮೀ ಹೊಳ್ಳ ಮುಂತಾದವರು, ಇಷ್ಟು ಸಾಹಿತ್ಯಿಕ ಹಿನ್ನೆಲೆಯನ್ನು ಹೊಂದಿರುವ ಭಾಷೆಯನ್ನು ಬೆಳೆಸಿ ಉಳಿಸಲು ಸೂಕ್ತ ಸ್ಥಾನಮಾನ ನೀಡಬೇಕೆಂಬ 25 ಲಕ್ಷ ಜನರ ಆಶಯದಂತೆ 'ಕುಂದಾಪುರ ಕನ್ನಡ ಭಾಷಾ ಅಕಾಡೆಮಿ' ಸ್ಥಾಪಿಸಲು ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳ ಗಮನ ಸೆಳೆದಿರುತ್ತಾರೆ.

**ಉತ್ತರ:**

ಯಾವುದೇ ವಿಶಾಲವಾದ ಪ್ರದೇಶದಲ್ಲಿ ಮಾತನಾಡುವ ಜನರಲ್ಲಿ ಪ್ರದೇಶದಿಂದ ಪ್ರದೇಶಕ್ಕೆ ಭಾಷೆಗಳಲ್ಲಿ ವ್ಯತ್ಯಾಸಗಳು ಇರುತ್ತವೆ. ಕರ್ನಾಟಕದಲ್ಲಿ ಕಲಬುರಗಿ ಭಾಗದಲ್ಲಿ ಮಾತನಾಡುವ ಕನ್ನಡಕ್ಕೂ ಧಾರವಾಡ ಭಾಗದಲ್ಲಿ ಮಾಡನಾಡುವ ಕನ್ನಡ ಭಾಷೆಯಲ್ಲಿ ವ್ಯತ್ಯಾಸಗಳಿವೆ. ಈ ಎರಡೂ ಭಾಗಗಳಲ್ಲಿ ಮಾತನಾಡುವ ಕನ್ನಡ ಭಾಷೆಯಲ್ಲಿ ವ್ಯತ್ಯಾಸವಿರುವಂತೆ, ಮೈಸೂರು ಭಾಗದಲ್ಲಿ ಆಡುವ ಕನ್ನಡ ಭಾಷೆ, ಕರಾವಳಿ ಭಾಗದಲ್ಲಿ ಮಾತನಾಡುವ ಕನ್ನಡ ಭಾಷೆ, ಮಧ್ಯ ಕರ್ನಾಟಕದಲ್ಲಿ ಇರುವ ಕನ್ನಡ ಭಾಷೆಯಲ್ಲಿ ವ್ಯತ್ಯಾಸಗಳಿವೆ. ಹೀಗೆ ಯಾವುದೇ ಪ್ರದೇಶದಲ್ಲಿ ಒಂದೇ ತೆರನಾದ ಕನ್ನಡ ಭಾಷೆ ಮಾತನಾಡುವವರು ಸಿಗುವುದಿಲ್ಲ. ಪ್ರದೇಶದಿಂದ ಪ್ರದೇಶಕ್ಕೆ ಕನ್ನಡ ಭಾಷಾ ಪ್ರಭೇದಗಳು ಇರುವುದನ್ನು ಗಮನಿಸುತ್ತೇವೆ. ಹಾಗೆಯೇ, ಕರಾವಳಿ ಭಾಗದ ಪ್ರದೇಶದಲ್ಲಿ ಮಾತನಾಡುವ ಕನ್ನಡದಲ್ಲಿ ಒಂದು ವಿಶಿಷ್ಟವಾದ ಪ್ರಭೇದವಿದ್ದು, ಅದು ಕುಂದಗನ್ನಡವೆಂದು ಗುರುತಿಸಲಾಗುತ್ತದೆ. ಕರ್ನಾಟಕ ರಾಜ್ಯದಲ್ಲಿ ವಿವಿಧ ಭಾಗಗಳಲ್ಲಿ ಬೇರೆ ಬೇರೆ ರೀತಿಯಲ್ಲಿ ಕನ್ನಡ ಮಾತನಾಡುವುದು ಸರ್ವೇ ಸಾಮಾನ್ಯ. ಈ ಹಿನ್ನೆಲೆಯಲ್ಲಿ ಭಾಷಾ ವಿಭಿನ್ನತೆಯನ್ನು ಹೊಂದಿರುವ ಕನ್ನಡಕ್ಕೆ ಪ್ರತ್ಯೇಕ ಕುಂದಾಪುರ ಕನ್ನಡ ಅಕಾಡೆಮಿ ಸ್ಥಾಪಿಸುವುದು ಕನ್ನಡ ಭಾಷಾ ಸಮಗ್ರತೆಯ ದೃಷ್ಟಿಯಿಂದ ಸೂಕ್ತವಲ್ಲ.

**ಸಂಖ್ಯೆ**.ಕಸಂವಾ/17/ಕೆಓಎಲ್ ಆಕ/2023

**(ವಿ.ಸುನಿಲ್ ಕುಮಾರ್)**
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು